# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2013-14ನೇ ಸಾಲಿನಲ್ಲಿ ಕೃಷಿ ಇಲಾಖೆಯ ಪ್ರಧಾನ ಮಂತ್ರಿಗಳ ಪುನರ್ವಸತಿ ಪ್ಯಾಕೇಜ್ ಯೋಜನೆಯ (PMRP) ಮೌಲ್ಯಮಾಪನ ಕೈಗೊಳ್ಳುವ ಬಗ್ಗೆ.

ಓದಲಾಗಿದೆ: 1. ದಿ: 27-07-2013 ರಂದು ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ಜರುಗಿದ RFD ಕುರಿತ ಸಭೆ ನಡವಳಿ.

2. ದಿ: 17-09-2013 ರಂದು ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆರವರ ಅಧ್ಯಕ್ಷತೆಯಲ್ಲಿ ನಡೆದ ಪ್ರಧಾನ ಮಂತ್ರಿಗಳ ಪುನರ್ವಸತಿ ಪ್ಯಾಕೇಜ್‌ನ ಘಟಕವಾರು /ಕ್ರಿಯಾವಾರು ಭೌತಿಕ ಮತ್ತು ಆರ್ಥಿಕ ಸಾಧನೆ ಕುರಿತ ಸಭೆ ನಡವಳಿ.

3. ಇನ್ಸ್‌ಟಿಟ್ಯೂಟ್ ಫಾರ್ ಸೋಶಿಯಲ್ ಅಂಡ್ ಎಕಾನಮಿಕ್ ಚೇಂಜ್ ಸಂಸ್ಥೆ ಪತ್ರ ದಿ: 03-10-2013.

4. ಕೃಷಿ ಆಯುಕ್ತಾಲಯದ ಪತ್ರ ಸಂ: ಪಿಎಲ್‌ಎನ್/ತಾಂ-4/ಆರ್&ಡಿ/ 2013-14, ದಿ: 11-11-2013.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1) ರ ನಡವಳಿಯಲ್ಲಿ ವಿವರಿಸಿರುವಂತೆ ಕರ್ನಾಟಕ ಮೌಲ್ಯಮಾಪನ ಪ್ರಾಧಿಕಾರದ ವತಿಯಿಂದ ಎಲ್ಲಾ ಮಹತ್ವಾಕಾಂಕ್ಷಿ ಯೋಜನೆ (Flagship programme) ಗಳ ಮೌಲ್ಯಮಾಪನ ಕೈಗೊಳ್ಳಲು ಸೂಚನೆಯಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2) ರ ನಡವಳಿಯಲ್ಲಿ ಸೆಪ್ಟೆಂಬರ್-2011 ರ ಅಂತ್ಯದ ಸದರಿ ಯೋಜನೆಯ ಅನುಷ್ಠಾನ ಕುರಿತು ಮೌಲ್ಯಮಾಪನ ಕೈಗೊಳ್ಳುವಂತೆ ISEC ಸಂಸ್ಥೆಗೆ ವಹಿಸಿ ಕೊಡಬಹುದಾಗಿದೆ ಎಂದು ನಿರ್ಧರಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3) ರಲ್ಲಿ ಕೃಷಿ ಇಲಾಖೆಯಲ್ಲಿ ಪ್ರಧಾನಮಂತ್ರಿ ಪುನರ್ವಸತಿ ಪ್ಯಾಕೇಜ್ ಕಾರ್ಯಕ್ರಮ ಅನುಷ್ಠಾನ ಕುರಿತು ಮೌಲ್ಯಮಾಪನ ಅಧ್ಯಯನವನ್ನು ಕೈಗೊಳ್ಳಲಾಗುವುದು ಎಂದು ISEC ಸಂಸ್ಥೆ ಎಂದು ತಿಳಿಸಿದೆ.

ಮೇಲೆ ಓದಲಾದ ಕ್ರಮಾಂಕ (4) ರಲ್ಲಿ ಕೃಷಿ ಆಯುಕ್ತರು, ಕೃಷಿ ಇಲಾಖೆಯ ಪ್ರಧಾನಮಂತ್ರಿಗಳ ಪುನರ್ವಸತಿ ಪ್ಯಾಕೇಜ್ ಯೋಜನೆಯ ಮೌಲ್ಯಮಾಪನವನ್ನು ISEC ಸಂಸ್ಥೆ, ಬೆಂಗಳೂರು ಇವರು ಕೈಗೊಳ್ಳಲು ರೂ.17.57 ಲಕ್ಷಗಳಿಗೆ ಪ್ರಸ್ತಾವನೆ ಸಲ್ಲಿಸಿರುವುದರಿಂದ ಸದರಿ ಯೋಜನೆಯ ಮೌಲ್ಯ ಮಾಪನವನ್ನು ಕರ್ನಾಟಕ ಮೌಲ್ಯ ಮಾಪನ ಪ್ರಾಧಿಕಾರದ ವತಿಯಿಂದ ಕೈಗೊಳ್ಳಲು ಅನುಮತಿ ನೀಡಿ, ಸದರಿ ವಿಷಯವಾಗಿ ISEC ಸಂಸ್ಥೆಯು ಸಲ್ಲಿಸುವ ಬಿಲ್ಲುಗಳಿಗೆ ಮೇಲು ಸಹಿ ಮಾಡುವ ಅಧಿಕಾರವನ್ನು ಕೃಷಿ ನಿರ್ದೇಶಕರಿಗೆ ನೀಡಿ ಆದೇಶ ಹೊರಡಿಸಬೇಕೆಂದು ಕೋರಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಕೃಇ/31/ಕೃಇಕ/2013, ಬೆಂಗಳೂರು,</u>
<u>ದಿನಾಂಕ: 24-02-2014.</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, 2013-14ನೇ ಸಾಲಿನಲ್ಲಿ ಕೃಷಿ ಇಲಾಖೆಯ ಚಾಲ್ತಿ ಯೋಜನೆಯಾದ ಕೃಷಿ ನಿರ್ದೇಶನಾಲಯ ಲೆಕ್ಕ ಶೀರ್ಷಿಕೆ :2401-00-001-1-01 ಉಪ ಲೆಕ್ಕ ಶೀರ್ಷಿಕೆ:101 (ಸಹಾಯಾನುದಾನ) ಅಡಿ ಅಲ್ಪಾವಧಿ ಸಂಶೋಧನೆ ಹಾಗೂ ಇಲಾಖೆಯ ಯೋಜನೆಗಳ ಮೌಲ್ಯಮಾಪನ ಕೈಗೊಳ್ಳಲು ಒದಗಿಸಲಾದ ರೂ.150.00 ಲಕ್ಷಗಳಲ್ಲಿ ಈಗಾಗಲೇ ಬಿಡುಗಡೆಯಾಗಿರುವ ಅನುದಾನದಲ್ಲಿ ರೂ.17.57 ಲಕ್ಷಗಳನ್ನು (ಹದಿನೇಳು ಲಕ್ಷದ ಐವತ್ತೇಳು ಸಾವಿರ ರೂಪಾಯಿಗಳು ಮಾತ್ರ) ಕೃಷಿ ಇಲಾಖೆಯ ಪ್ರಧಾನ ಮಂತ್ರಿಗಳ ಪುನರ್ವಸತಿ ಪ್ಯಾಕೇಜ್ ಯೋಜನೆಯ (PMRP) ಮೌಲ್ಯಮಾಪನವನ್ನು Institute for Social and Economic Change (ISEC) ಸಂಸ್ಥೆ, ಬೆಂಗಳೂರು ಇವರು ಕೈಗೊಳ್ಳಲು ಮಂಜೂರಾತಿ ನೀಡಿದೆ.

ಸದರಿ ವಿಷಯವಾಗಿ ISEC ಸಂಸ್ಥೆಯು ಸಲ್ಲಿಸುವ ಬಿಲ್ಲುಗಳಿಗೆ ಮೇಲು ಸಹಿ ಮಾಡುವ ಅಧಿಕಾರವನ್ನು ಕೃಷಿ ನಿರ್ದೇಶಕರಿಗೆ ನೀಡಿ ಆದೇಶಿಸಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂ: ಕೃಇ/11/ಆಂಆಸ/2014, ದಿ: 17-01-2014 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ್ ಪಾಟೀಲ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ

<u>ಇವರಿಗೆ:</u>

1. ಪಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
3. ಪಧಾನ ಮಹಾಲೇಖಪಾಲರು (A&E), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
4. ಮಹಾಲೇಖಪಾಲರು, (ಲೆಕ್ಕ ಪತ್ರ ಮತ್ತು ತನಿಖೆ) ಕರ್ನಾಟಕ, ಬೆಂಗಳೂರು.
5. ಆಯುಕ್ತರು/ನಿರ್ದೇಶಕರು, ಕೃಷಿ ಇಲಾಖೆ, ಬೆಂಗಳೂರು.
6. ಡಾ.ಎಂ.ಜೆ.ಬೆಂಡೆ, ಇನ್‌ಸ್ಟಿಟ್ಯೂಟ್ ಫಾರ್ ಸೋಶಿಯಲ್ ಅಂಡ್ ಎಕಾನಮಿಕ್ ಚೇಂಜ್ ಸಂಸ್ಥೆ, ನಾಗರಬಾವಿ, ಬೆಂಗಳೂರು-560 072.
7. ನಿರ್ದೇಶಕರು, ಖಜಾನೆ ಇಲಾಖೆ, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು
9. ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ಬೆಂಗಳೂರು.
10. ಸರ್ಕಾರದ ಉಪಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ. ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.
14. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.